3533

FTS No. 1094380

M. D.
30 NOV 2018
KPTCL

ಕರ್ನಾಟಕ ಸರ್ಕಾರ

ಸಂಖ್ಯೆ:ಸಿಆಸುಇ 248 ಆರ್‌ಟಿಐ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಜನಸ್ಪಂದನ)
3ನೇ ಮಹಡಿ, ಪೋಡಿಯಂ ಬ್ಲಾಕ್,
ವಿಶ್ವೇಶ್ವರಯ್ಯ ಮುಖ್ಯ ಗೋಪುರ,
ಬೆಂಗಳೂರು, ದಿನಾಂಕ: 20.11.2018

ಸುತ್ತೋಲೆ

ವಿಷಯ: ಮಾಹಿತಿ ಹಕ್ಕು ಅಧಿನಿಯಮ, 2005ರ ಪರಿಣಾಮಕಾರಿ ಅನುಷ್ಠಾನದ ಬಗ್ಗೆ.

ಉಲ್ಲೇಖ:
1. ಅರೆ ಸರ್ಕಾರಿ ಪತ್ರ ಸಂಖ್ಯೆ: ಸಿಆಸುಇ 119 ಆರ್‌ಟಿಐ 2014, ದಿನಾಂಕ: 12.08.2014
2. ಮುಖ್ಯ ಮಾಹಿತಿ ಆಯುಕ್ತರು, ಕರ್ನಾಟಕ ಮಾಹಿತಿ ಆಯೋಗ ಇವರ ಪತ್ರ ಸಂಖ್ಯೆ:ಕೆಐಸಿ/ಎಲ್‌ಕೆಎಂ/267/2018 ದಿನಾಂಕ:23.10.2018

ನಿರ್ದೇಶಕರು (ಆಡಳಿತ & ಮಾ. ಸಂ)
DGM (P)

*****

ಮಾಹಿತಿ ಹಕ್ಕು ಅಧಿನಿಯಮ, 2005ರ ಕಲಂ 25(1)ರನ್ವಯ ರಾಜ್ಯ ಮಾಹಿತಿ ಆಯೋಗವು ಪ್ರತಿಯೊಂದು ವರ್ಷದ ಮುಕ್ತಾಯದ ನಂತರ, ಸಾಧ್ಯವಾದಷ್ಟು ಬೇಗನೆ, ಆ ವರ್ಷದ ಅವಧಿಯಲ್ಲಿ ಈ ಅಧಿನಿಯಮದ ಉಪಬಂಧಗಳನ್ನು ಕಾರ್ಯಗತಗೊಳಿಸಿದ ಬಗ್ಗೆ ಒಂದು ವಾರ್ಷಿಕ ವರದಿಯನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಬೇಕಾಗಿರುತ್ತದೆ.

ಮಾಹಿತಿ ಹಕ್ಕು ಅಧಿನಿಯಮ, 2005ರ ಕಲಂ 25(2)(3)ರನ್ವಯ ಸಚಿವಾಲಯದ ಪ್ರತಿಯೊಂದು ಇಲಾಖೆಯು ತನ್ನ ಅಧಿಕಾರ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕ ಪ್ರಾಧಿಕಾರಿಗಳಿಗೆ ಸಂಬಂಧಿಸಿದಂತೆ ವಾರ್ಷಿಕ ವರದಿಯನ್ನು ಸಿದ್ಧಪಡಿಸಲು ಅಗತ್ಯಪಡಿಸಲಾದಂತಹ ಮಾಹಿತಿಯನ್ನು ಸಂಗ್ರಹಿಸಿ ರಾಜ್ಯ ಮಾಹಿತಿ ಆಯೋಗಕ್ಕೆ ಒದಗಿಸತಕ್ಕದ್ದು ಮತ್ತು ಆ ಮಾಹಿತಿಯನ್ನು ಒದಗಿಸುವುದಕ್ಕೆ ಸಂಬಂಧಿಸಿದ ಅಗತ್ಯತೆಗಳನ್ನು ಪಾಲಿಸುವುದು ಕಡ್ಡಾಯವಾಗಿರುತ್ತದೆ.

ಸಚಿವಾಲಯದ ಇಲಾಖೆಗಳು ಅಸಮರ್ಪಕ ಮಾಹಿತಿಯನ್ನು ನೀಡುವುದರಿಂದ ವಾರ್ಷಿಕ ವರದಿಯಲ್ಲಿ ಲೋಪದೋಷಗಳಾಗುವ ಸಾಧ್ಯತೆಗಳು ಇವೆ. ಆದ್ದರಿಂದ ಮಾಹಿತಿ ಹಕ್ಕು ಅಧಿನಿಯಮ, 2005ರ ಕಲಂ 25ರನ್ವಯ ಕರ್ನಾಟಕ ಮಾಹಿತಿ ಆಯೋಗಕ್ಕೆ ಸಮರ್ಪಕ ಮಾಹಿತಿಯನ್ನು ಒದಗಿಸತಕ್ಕದ್ದು.

| | |
|---|---|
| EE (IT) | |
| EE (IT)-1 | A/c |
| EE (IT) (NW&DC) | |
| EE (MIS) | |
| DCA (IT) | ✓ |

SE (IT & MIS)

SEE (IT & MIS)
KPTCL

ಮು.ತಿ.ನೋ

ಮಾಹಿತಿ ಹಕ್ಕು ಅಧಿನಿಯಮ 2005ರ ಪ್ರಕರಣ 18, 19 ಮತ್ತು 20ರಡಿ ಮಾಹಿತಿ ಆಯೋಗದ ಅಧಿಕಾರಗಳನ್ನು ಸ್ಪಷ್ಟಪಡಿಸಿದ್ದು, ಮಾಹಿತಿ ಹಕ್ಕು ಅಧಿನಿಯಮ 2005ರಡಿ ಮಾಹಿತಿ ಕೋರಿದ ಯಾರೇ ವ್ಯಕ್ತಿಯಿಂದ ರಾಜ್ಯ ಮಾಹಿತಿ ಆಯೋಗವು ಫಿರ್ಯಾದು, ಮೊದಲ ಮೇಲ್ಮನವಿ ಪ್ರಾಧಿಕಾರದ ನಿರ್ಣಯದ ವಿರುದ್ಧ ಎರಡನೇ ಮೇಲ್ಮನವಿಯನ್ನು ಸ್ವೀಕರಿಸಿ, ವಿಚಾರಣೆ ನಡೆಸಿ, ಆಯಾ ಪ್ರಕರಣದ ಅನುಸಾರ ದಂಡನೆಯನ್ನು ವಿಧಿಸುವ ಅಧಿಕಾರ ಮತ್ತು ಮಾಹಿತಿ ಹಕ್ಕು ಅಧಿನಿಯಮ 2005ರ ಉಪಬಂಧಗಳನ್ನು ಪಾಲಿಸಲು ಅಗತ್ಯವಾದ ಯಾವುದೇ ಕ್ರಮಗಳನ್ನು ಕೈಗೊಳ್ಳಲು ಸಾರ್ವಜನಿಕ ಪ್ರಾಧಿಕಾರವನ್ನು ಅಗತ್ಯಪಡಿಸುವ ಅಧಿಕಾರ ಮಾಹಿತಿ ಆಯೋಗಕ್ಕಿದೆ.

ಮಾಹಿತಿ ಹಕ್ಕು ಅಧಿನಿಯಮ 2005ರ ಅನುಷ್ಠಾನಕ್ಕಾಗಿ ಹಾಗೂ ಪ್ರಕರಣ 4(1)(ಬಿ) ರನ್ವಯ ಸ್ವಯಂ ಘೋಷಿತ ಮಾಹಿತಿಯನ್ನು ಪ್ರಕಟಿಸುವುದು ಕಡ್ಡಾಯವಾಗಿದ್ದು, ಆಯೋಗವು ವಾರ್ಷಿಕ ವರದಿ ತಯಾರಿಕೆಗಾಗಿ ಒದಗಿಸುವ ನಮೂನೆಯಲ್ಲಿ ಕರ್ನಾಟಕ ಮಾಹಿತಿ ಆಯೋಗಕ್ಕೆ ಸಮರ್ಪಕ ಮಾಹಿತಿಯನ್ನು ಒದಗಿಸತಕ್ಕದ್ದು.

ಮೇಲಿನ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ತಮ್ಮ ಆಡಳಿತಾಧೀನದ ಎಲ್ಲಾ ಇಲಾಖೆಗಳಿಗೆ ಸೂಚಿಸುವಂತೆ ಕೋರಿದೆ.

(ಪರಮೇಶ್ ಪಾಂಡೆ),
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಜನಸ್ಪಂದನ)

**ಇವರಿಗೆ,**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳು
4. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
5. ಎಲ್ಲಾ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು

ಪ್ರತಿ:- ಮಾಹಿತಿಗಾಗಿ

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ವಿಧಾನಸೌಧ
3. ಕಾರ್ಯದರ್ಶಿಗಳು, ಕರ್ನಾಟಕ ಮಾಹಿತಿ ಆಯೋಗ, ಮಾಹಿತಿ ಸೌಧ, ಬೆಂಗಳೂರು.